ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 17-02-2017

# ಪತ್ರಿಕಾ ಆಮಂತ್ರಣ

1. ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮ:

   ತಿಂಗಳ ಅತಿಥಿ:

   ಪ. ಸಂಪತ್‌ಕುಮಾರ್,

   ಹಿರಿಯ ಚಿತ್ರ ಕಲಾವಿದರು,

   ದಿನಾಂಕ: 18-02-2017, ಶನಿವಾರ ಸಮಯ: ಸಂಜೆ 4-00 ಗಂಟೆಗೆ

   ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ , ಬೆಂಗಳೂರು.

## ಪತ್ರಿಕಾ ಪ್ರಕಟಣೆ

## ಬೆರಳಚ್ಚುಗಾರರು ಮತ್ತು ಶೀಘ್ರಲಿಪಿಗಾರರ ಹುದ್ದೆಗೆ ಮೂಲ ದಾಖಲೆಗಳ ಪರಿಶೀಲನೆ

ಬೆಂಗಳೂರು, ಫೆಬ್ರವರಿ 17, (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 661 ಬೆರಳಚ್ಚುಗಾರರು ಮತ್ತು 182 ಶೀಘ್ರಲಿಪಿಗಾರರ ಹುದ್ದೆಗಳಿಗೆ ಆನ್-ಲೈನ್‌ನಲ್ಲಿ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ನಿಗದಿ ವಿದ್ಯಾರ್ಹತೆಯಲ್ಲಿ ಪಡೆದಿರುವ ಅಂಕಗಳ ಜ್ಯೇಷ್ಠತೆ ಹಾಗೂ ಮೀಸಲಾತಿ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳಿಗೆ ಮೂಲ ದಾಖಲೆಗಳ ಪರಿಶೀಲನೆಗಾಗಿ ಫೆಬ್ರವರಿ 25, 27 ಹಾಗೂ 28 ರಂದು ಆಯೋಗದ ಕೇಂದ್ರ ಕಚೇರಿ, ಉದ್ಯೋಗ ಸೌಧ, ಬೆಂಗಳೂರು – ಇಲ್ಲಿ ಹಾಜರಾಗುವಂತೆ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ.

ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ಕೇಂದ್ರ ಕಚೇರಿ ಮತ್ತು ಪ್ರಾಂತೀಯ ಕಚೇರಿಯ ಸೂಚನಾಫಲಕ ಹಾಗೂ ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಎಂಆರ್‌ಎಂ/ಜಿಪಿಆರ್.

# ಪರಿಷ್ಕೃತ ಕೀ ಉತ್ತರ ಪ್ರಕಟ

ಬೆಂಗಳೂರು, ಫೆಬ್ರವರಿ 17, (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ತಾಂತ್ರಿಕೇಗತರ ಪದವಿ ಮಟ್ಟದ ವಿದ್ಯಾರ್ಹತೆಯುಳ್ಳ ಹುದ್ದೆಗಳಿಗೆ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ-ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದ್ದು, ಏಳು ದಿನಗಳೊಳಗಾಗಿ ಆಕ್ಷೇಪಣೆಗಳನ್ನು ಸಲ್ಲಿಸುವಂತೆ ಅಭ್ಯರ್ಥಿಗಳಿಗೆ ಸೂಚಿಸಲಾಗಿತ್ತು.

ಕೀ-ಉತ್ತರಗಳಿಗೆ ನಿಗದಿಪಡಿಸಿದ ದಿನಾಂಕಗಳೊಳಗಾಗಿ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರಿಗೆ ನೀಡಿ, ಅವರ ಸಲಹೆಯಂತೆ ಸಾಮಾನ್ಯ ಅಧ್ಯಯನ ಹಾಗೂ ಸಂವಹನ ಪತ್ರಿಕೆಯ ಪರಿಷ್ಕೃತ ಕೀ-ಉತ್ತರಗಳನ್ನು ಆಯೋಗದ ವೆಬ್‌ಸೈಟ್ "http://kpsc.kar.nic.in/Key Answers" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.

ಎಂಆರ್‌ಎಂ/ಜಿಪಿಆರ್.